ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಸುದ್ದಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ     ದಿನಾಂಕ : DATE : 19/09/2019

# ಸಂಸದ ಪ್ರಜ್ವಲ್‌ಗೆ ಸಮನ್ಸ್ ಜಾರಿ

■ **ವಿಕ ಸುದ್ದಿಲೋಕ** ಬೆಂಗಳೂರು

ನಾಮಪತ್ರ ಸಲ್ಲಿಕೆ ವೇಳೆ ತಪ್ಪು ಮಾಹಿತಿ ನೀಡಿದ್ದಾರೆಂದು ಸಲ್ಲಿಸಲಾಗಿರುವ ಚುನಾವಣಾ ತಕರಾರು ಅರ್ಜಿ ಸಂಬಂಧ ಹಾಸನ ಸಂಸದ ಪ್ರಜ್ವಲ್ ರೇವಣ್ಣಗೆ ಸಮನ್ಸ್ ಜಾರಿಯಾಗಿದ್ದು, ಅವರ ಪರ ವಕೀಲರು ಹೈಕೋರ್ಟ್‌ನಲ್ಲಿ ಬುಧವಾರ ವಕಾಲತು ಹಾಕಿದ್ದಾರೆ.

ಪ್ರಜ್ವಲ್ ರೇವಣ್ಣ ಆಯ್ಕೆಯನ್ನು ಅಸಿಂಧುಗೊಳಿಸಬೇಕೆಂದು ಕೋರಿ ಪರಾಜಿತ ಅಭ್ಯರ್ಥಿ ಎ.ಮಂಜು ಮತ್ತು ವಕೀಲ ದೇವರಾಜೇಗೌಡ ಸಲ್ಲಿಸಿರುವ ಚುನಾವಣಾ ತಕರಾರು ಅರ್ಜಿಗಳು ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹ ಅವರಿದ್ದ ಏಕಸದಸ್ಯ ಪೀಠದ ಮುಂದೆ ವಿಚಾರಣೆಗೆ ಬಂದವು.

ಆಗ ಅರ್ಜಿಗೆ ಸಂಬಂಧಿಸಿದಂತೆ ಪ್ರತಿವಾದಿ ಪ್ರಜ್ವಲ್ ರೇವಣ್ಣ ಪರ ವಕಾಲತು ಸಲ್ಲಿಸಿರುವುದಾಗಿ ವಕೀಲ ಎಂ.ಕೇಶವ ರೆಡ್ಡಿ ಹೈಕೋರ್ಟ್‌ಗೆ ತಿಳಿಸಿದರು. ನ್ಯಾಯಾಲಯ ಅದನ್ನು ದಾಖಲಿಸಿಕೊಂಡು ಪ್ರಕರಣದ ಮುಂದಿನ ವಿಚಾರಣೆ ಸೆ.30ಕ್ಕೆ ನಿಗದಿಪಡಿಸಿತು.

ಈ ಹಿಂದಿನ ವಿಚಾರಣೆ ದಿನದಂದು ಪ್ರಜ್ವಲ್ ರೇವಣ್ಣಗೆ ಸಮನ್ಸ್ ಜಾರಿಯಾಗದೇ ಇರುವುದಕ್ಕೆ ಹೈಕೋರ್ಟ್, ಸ್ಥಳೀಯ ಪತ್ರಿಕೆಯಲ್ಲಿ ಪ್ರಕಟಣೆ ನೀಡಿ ಆ ಮೂಲಕ ಸಮನ್ಸ್ ಜಾರಿಯಾಗುವಂತೆ ಅರ್ಜಿದಾರರಿಗೆ ನಿರ್ದೇಶಿಸಿತ್ತು.

4